# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಂತರಗಂಗಾ ಸೂಕ್ಷ್ಮ ನೀರಾವರಿ ನಿಗಮ ಇವರನ್ನು PMKSY–ರಾಜ್ಯ ಮಟ್ಟದ ಮಂಜೂರಾತಿ ಸಮಿತಿ ಹಾಗೂ ಅಂತರ ಇಲಾಖಾ ಕಾರ್ಯತಂಡದ (IDWG) ಸದಸ್ಯರನ್ನಾಗಿ ನೇಮಿಸುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ಕೃತೋಇ 245 AML 2015, ದಿ:20.10.2015.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಂತರಗಂಗಾ ಸೂಕ್ಷ್ಮ ನೀರಾವರಿ ನಿಗಮ ನಿಯಮಿತ ಇವರ ಪತ್ರ ಸಂಖ್ಯೆ:ವ್ಯನಿ/ಕಂ.ಸೂ.ನೀ.ನಿ/2019–20, ದಿ:05.04.2019.
3. ದಿ:21.06.2019 ರಂದು ನಡೆದ ರಾಜ್ಯ ಮಟ್ಟದ ಮಂಜೂರಾತಿ ಸಮಿತಿ ಸಭೆಯ ನಡವಳಿ.
4. ಆಯುಕ್ತರು, ಕೃಷಿ ಇಲಾಖೆ ಇವರ ಪತ್ರ ಸಂಖ್ಯೆ:ಉಕೃನಿ/ಕೃಯಾಂ&ಸೂನೀ/ಸೂನೀ/PMKSY-SLSC–2/2019–20, ದಿ:03.07.2019.

*****

**<u>ಪ್ರಸ್ತಾವನೆ:</u>**

ಮೇಲೆ ಕ್ರಮ ಸಂಖ್ಯೆ:1 ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯ ಅನುಷ್ಠಾನಕ್ಕಾಗಿ ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ರಾಜ್ಯ ಮಟ್ಟದ ಮಂಜೂರಾತಿ ಸಮಿತಿ (SLSC) ಹಾಗೂ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ಅಂತರ ಇಲಾಖಾ ಕಾರ್ಯತಂಡವನ್ನು (IDWG) ರಚಿಸಿ ಆದೇಶಿಸಲಾಗಿರುತ್ತದೆ.

ಮೇಲೆ ಕ್ರಮ ಸಂಖ್ಯೆ (2) ರಲ್ಲಿನ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಂತರಗಂಗಾ ಸೂಕ್ಷ್ಮ ನೀರಾವರಿ ನಿಗಮ ನಿಯಮಿತ ಇವರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಂತರಗಂಗಾ ಸೂಕ್ಷ್ಮ ನೀರಾವರಿ ನಿಗಮ ನಿಯಮಿತ ಇವರನ್ನು ರಾಜ್ಯ ಮಟ್ಟದ ಮಂಜೂರಾತಿ ಸಮಿತಿಯ (SLSC) ಸದಸ್ಯರಾಗಿ/ಸದಸ್ಯ ಕಾರ್ಯದರ್ಶಿಯಾಗಿ ಸೇರ್ಪಡೆ ಮಾಡುವಂತೆ ಹಾಗೂ ಅಂತರ ಇಲಾಖಾ ಕಾರ್ಯತಂಡ ಸಮಿತಿಯ (IDWG) ಪ್ರಸ್ತುತ ಇರುವ ಸದಸ್ಯ ಕಾರ್ಯದರ್ಶಿ ಸ್ಥಾನಕ್ಕೆ ಕೃಷಿ ನಿರ್ದೇಶಕರ ಬದಲಾಗಿ ನೇಮಿಸುವಂತೆ ಕೋರಲಾಗಿರುತ್ತದೆ.

ಮೇಲೆ ಕ್ರಮ ಸಂಖ್ಯೆ (3) ರಲ್ಲಿನ ಸರ್ಕಾರದ ಮುಖ್ಯ ಕಾರ್ಯದಶಿಯವರ ಅಧ್ಯಕ್ಷತೆಯಲ್ಲಿನ ರಾಜ್ಯ ಮಟ್ಟದ ಮಂಜೂರಾತಿ ಸಮಿತಿ ಸಭೆಯ ನಡವಳಿಯಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಂತರಗಂಗಾ ಸೂಕ್ಷ್ಮ ನೀರಾವರಿ ನಿಗಮ ನಿಯಮಿತ ಇವರನ್ನು ರಾಜ್ಯ ಮಟ್ಟದ ಮಂಜೂರಾತಿ ಸಮಿತಿ (SLSC) ಹಾಗೂ ಅಂತರ ಇಲಾಖಾ ಕಾರ್ಯತಂಡ ಸಮಿತಿ (IDWG) ಯ ಸದಸ್ಯರಾಗಿ ಸೇರಿಸಲು ಅನುಮೋದನೆಯನ್ನು ನೀಡಲಾಗಿರುತ್ತದೆ.

ಮೇಲೆ ಕ್ರಮ ಸಂಖ್ಯೆ (4) ರಲ್ಲಿನ ಆಯುಕ್ತರು, ಕೃಷಿ ಇಲಾಖೆ ಇವರ ಪತ್ರದಲ್ಲಿ ದಿ:21.06.2019 ರಂದು ನಡೆದ ರಾಜ್ಯ ಮಟ್ಟದ ಮಂಜೂರಾತಿ ಸಮಿತಿ ಸಭೆಯಲ್ಲಿ ಅನುಮೋದನೆ ನೀಡಿರುವಂತೆ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಂತರಗಂಗಾ ಸೂಕ್ಷ್ಮ ನೀರಾವರಿ ನಿಗಮ ನಿಯಮಿತ ಇವರನ್ನು ರಾಜ್ಯ ಮಟ್ಟದ ಮಂಜೂರಾತಿ ಸಮಿತಿ (SLSC) ಹಾಗೂ ಅಂತರ ಇಲಾಖಾ ಕಾರ್ಯತಂಡ ಸಮಿತಿಯ (IDWG) ಸದಸ್ಯರನ್ನಾಗಿ ಸೇರಿಸಿ ಸರ್ಕಾರದ ಆದೇಶ ಹೊರಡಿಸುವಂತೆ ಕೋರಲಾಗಿರುತ್ತದೆ.

ಪ್ರಸ್ತಾವನೆಯನ್ನು ಸರ್ಕಾರವು ಕೂಲಕಂಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 54 ಕೃಕೈಲು 2019, ಬೆಂಗಳೂರು, ದಿನಾಂಕ:31-07-2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಂತರಗಂಗ ಸೂಕ್ಷ್ಮ ನೀರಾವರಿ ನಿಗಮ ನಿಯಮಿತ, ಬೆಂಗಳೂರು ಇವರನ್ನು ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಸರ್ಕಾರದ ಆದೇಶ ಸಂಖ್ಯೆ:ಕೃತೋಇ 245 AML 2015, ದಿ:20.10.2015 ರಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ರಾಜ್ಯ ಮಟ್ಟದ ಮಂಜೂರಾತಿ ಸಮಿತಿಗೆ (SLSC) ಹಾಗೂ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ಅಂತರ ಇಲಾಖಾ ಕಾರ್ಯತಂಡ (IDWG) ಸಮಿತಿಗೆ ಸದಸ್ಯರನ್ನಾಗಿ ಸೇರ್ಪಡೆ ಮಾಡಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ<br>ಮತ್ತು ಅವರ ಹೆಸರಿನಲ್ಲಿ

BS Nagarathnam

(ಬಿ.ಎಸ್.ನಾಗರತ್ನಮ್ಮ)<br>ಸರ್ಕಾರದ ಅಧೀನ ಕಾರ್ಯದರ್ಶಿ<br>ಕೃಷಿ ಇಲಾಖೆ (ಯೋಜನೆ).

31/7

ಪ್ರತಿಯನ್ನು:

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) / (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01.
2. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾ.ಅ ಮತ್ತು ಪಂ.ರಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಅರಣ್ಯ, ಜೀವಶಾಸ್ತ್ರ ಮತ್ತು ಪರಿಸರ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
10. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
11. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ಸಣ್ಣ ನೀರಾವರಿ ಇಲಾಖೆ, ವಿಕಾಸಸೌಧ, ಬೆಂಗಳೂರು.
12. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ಪಶು ಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು
13. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ (ವಿ.ನಿ, ಭೂಮಿ ಮತ್ತು ಯುಪಿಓಆರ್), ಬಹುಮಹಡಿ ಕಟ್ಟಡ, ಬೆಂಗಳೂರು.
14. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಹಕಾರ ಇಲಾಖೆ, ಬೆಂಗಳೂರು.
15. ಸರ್ಕಾರದ ಕಾರ್ಯದರ್ಶಿ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು
16. ಆಯುಕ್ತರು, ಭೂಮಾಪನ ಹಾಗೂ ಕಂದಾಯ ವ್ಯವಸ್ಥೆ ಇಲಾಖೆ ಹಾಗೂ ನಿರ್ದೇಶಕರು, ಭೂಮಿ ಮತ್ತು ಯುಪಿಓಆರ್, ಬೆಂಗಳೂರು.
17. ಕೃಷಿ ಆಯುಕ್ತರು,/ಕೃಷಿ ನಿರ್ದೇಶಕರು, ಶೇಷಾದ್ರಿ ರಸ್ತೆ, ಬೆಂಗಳೂರು.

/

18. ಆಯುಕ್ತರು/ನಿರ್ದೇಶಕರು, ತೋಟಗಾರಿಕೆ ಇಲಾಖೆ, ಬೆಂಗಳೂರು.
19. ಕುಲಪತಿಗಳು, ಕೃಷಿ ವಿಶ್ವ ವಿದ್ಯಾಲಯ/ತೋಟಗಾರಿಕೆ ವಿಶ್ವ ವಿದ್ಯಾಲಯ, ಬೆಂಗಳೂರು/ ಧಾರವಾಡ/ ರಾಯಚೂರು/ಶಿವಮೊಗ್ಗ.
20. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು.
21. ಆಯುಕ್ತರು/ನಿರ್ದೇಶಕರು, ಪಶುಸಂಗೋಪನೆ ನಿರ್ದೇಶನಾಲಯ, ಬೆಂಗಳೂರು
22. ನಿರ್ದೇಶಕರು, ಮೀನುಗಾರಿಕೆ ನಿರ್ದೇಶನಾಲಯ, ಬೆಂಗಳೂರು.
23. ನಿರ್ದೇಶಕರು, ತೋಟಗಾರಿಕೆ ನಿರ್ದೇಶನಾಲಯ, ಬೆಂಗಳೂರು.
24. ನಿರ್ದೇಶಕರು, MNREGA, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ.
25. ಮುಖ್ಯ ಇಂಜಿನಿಯರ್, ಜಲಸಂಪನ್ಮೂಲ ಇಲಾಖೆ.
26. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ– 4&5), ಆರ್ಥಿಕ ಇಲಾಖೆ, ಬೆಂಗಳೂರು.
27. ಆಂತರಿಕ ಆರ್ಥಿಕ ಸಲಹೆಗಾರರು ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
28. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

****